## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಕೆರೆಗಳ ಪುನರುಜ್ಜೀವನ ಕಾರ್ಯಕ್ರಮದಡಿ ಜಿಲ್ಲಾ ಪಂಚಾಯತಿ ಕೆರೆಗಳಿಗಾಗಿ ಲೆಕ್ಕಶೀರ್ಷಿಕೆ:4702ರಡಿ ರಾಮನಗರ ಜಿಲ್ಲೆ ಚನ್ನಪಟ್ಟಣ ತಾ: ಜೆ.ಬ್ಯಾಡರಹಳ್ಳಿ ಪಂಚಾಯತಿ ಕಲ್ಲಾಪುರ ಊರ ಮುಂದಿನ ಕೆರೆ ಮತ್ತು ಚನ್ನಪಟ್ಟಣ ತಾ: ಜೆ. ಬ್ಯಾಡರಹಳ್ಳಿ ಜಗದಾಪುರ-ಬೈಚಾಪುರ ಕೆರೆ ಮತ್ತು ಕನಕಪುರ ತಾ: ಮುಳ್ಳಳ್ಳಿ ಗ್ರಾ.ಪಂ. ನ ಮುಳ್ಳಳ್ಳಿ ಬಸವನ ಕೆರೆ ಅಭಿವೃದ್ಧಿ ಕೈಗೊಂಡು ಪೂರ್ಣಗೊಳಿಸಿದ ಕಾಮಗಾರಿಯ ಬಾಕಿ ಬಿಲ್ ಪಾವತಿಗಾಗಿ ಅನುದಾನ ಬಿಡುಗಡೆ ಮಾಡುವ ಬಗ್ಗೆ.

**ಓದಲಾಗಿದೆ:**
1. ಸರ್ಕಾರದ ಆದೇಶ ಸಂ:ಗ್ರಾಅಪ:46:ಆರ್‌ಆರ್‌ಸಿ:2011 ದಿನಾಂಕ:11-3-2011
2. ಆರ್ಥಿಕ ಇಲಾಖೆಯ ಟಿಪ್ಪಣಿ ಸಂ:ಆಇ/331/ವೆಚ್ಚ-6/2016 ದಿನಾಂಕ:24-9-2016 ಹಾಗೂ ಆದೇಶ ಸಂಖ್ಯೆ:ಆಇ/53/ ಬಿಆರ್‌ಎಸ್/16 ದಿ:24-9-2016

**ಪ್ರಸ್ತಾವನೆ:**

ಕೆರೆಗಳ ಪುನರುಜ್ಜೀವನ ಕಾರ್ಯಕ್ರಮದಡಿ ಜಿಲ್ಲಾ ಪಂಚಾಯತಿ ಕೆರೆಗಳ ಕಾಮಗಾರಿಗಳನ್ನು ಅನುಷ್ಠಾನಗೊಳಿಸಲಾಗುತ್ತಿದೆ. ಪ್ರಸ್ತುತ 2016-17ನೇ ಸಾಲಿನಲ್ಲಿ ಈ ಕಾರ್ಯಕ್ರಮದಡಿ ಲೆಕ್ಕ ಶೀರ್ಷಿಕೆ-4702ರಡಿ ಬಾಕಿ ಬಿಲ್‌ಗಳ ಪಾವತಿಗೆ ಅನುದಾನ ಒದಗಿಸುವಂತೆ ಆರ್ಥಿಕ ಇಲಾಖೆಯನ್ನು ಕೋರಲಾಗಿ, 2016-17ನೇ ಸಾಲಿನ ಆಯವ್ಯಯ ಲೆಕ್ಕ ಶೀರ್ಷಿಕೆ: 4702-00-101-1-14 (ಹೊಸ ಕೆರೆಗಳ ನಿರ್ಮಾಣ ನಬಾರ್ಡ್ ಕಾಮಗಾರಿ) ಯೋಜನೆಯಡಿ ಒದಗಿಸಲಾಗಿರುವ ರೂ.50.00 ಕೋಟಿಗಳ ಅನುದಾನದಿಂದ ಲೆಕ್ಕ ಶೀರ್ಷಿಕೆ-4702-00-101-1-14 (ಹೊಸ ಕೆರೆಗಳ ನಿರ್ಮಾಣ ಬಂಡವಾಳ ವೆಚ್ಚಗಳು) ಅಡಿ ರೂ.29.96 ಕೋಟಿಗಳನ್ನು ಆರ್ಥಿಕ ಇಲಾಖೆಯು ಮೇಲೆ ಓದಲಾದ ಆದೇಶದಲ್ಲಿ ಮರು ಹೊಂದಾಣಿಕೆಗೆ ಮಂಜೂರಾತಿ ನೀಡಿರುತ್ತದೆ. ಈ ಅನುದಾನದಲ್ಲಿ ಕೆರೆಗಳ ಪುನರುಜ್ಜೀವನ ಕಾರ್ಯಕ್ರಮದಡಿ ಮುಂದುವರೆದು ಪೂರ್ಣಗೊಳಿಸಿದ ಕಾಮಗಾರಿಗಳ ಬಾಕಿ ಬಿಲ್ ಪಾವತಿಗಾಗಿ ರಾಮನಗರ ಜಿಲ್ಲಾ ಪಂಚಾಯತಿಗೆ ಅನುದಾನ ಬಿಡುಗಡೆ ಮಾಡಲು ಸರ್ಕಾರವು ತೀರ್ಮಾನಿಸಿರುತ್ತದೆ. ಆದ್ದರಿಂದ ಈ ಆದೇಶ

**ಸರ್ಕಾರದ ಆದೇಶ ಸಂಖ್ಯೆ:ಗ್ರಾಅಪ:79/15:ಆರ್‌ಆರ್‌ಸಿ:2016(ಭಾ-1), ಬೆಂಗಳೂರು, ದಿನಾಂಕ:18-1-2017.**

ಮೇಲಿನ ಪ್ರಸ್ತಾವನೆಯಲ್ಲಿ ವಿವರಿಸಿದಂತೆ, ಕೆರೆಗಳ ಪುನರುಜ್ಜೀವನ ಕಾರ್ಯಕ್ರಮದಡಿ ಕೈಗೊಂಡು ಪೂರ್ಣಗೊಳಿಸಿದ ರಾಮನಗರ ಜಿಲ್ಲೆ ಚನ್ನಪಟ್ಟಣ ತಾ: ನ ಜೆ.ಬ್ಯಾಡರಹಳ್ಳಿ ಪಂಚಾಯತಿ ಕಲ್ಲಾಪುರ ಊರ ಮುಂದಿನ ಕೆರೆ ಮತ್ತು ಚನ್ನಪಟ್ಟಣ ತಾ: ಜೆ. ಬ್ಯಾಡರಹಳ್ಳಿ ಜಗದಾಪುರ-ಬೈಚಾಪುರ ಕೆರೆ ಮತ್ತು ಕನಕಪುರ ತಾ: ಮುಳ್ಳಳ್ಳಿ ಗ್ರಾ.ಪಂ. ನ ಮುಳ್ಳಳ್ಳಿ ಬಸವನ ಕೆರೆ ಅಭಿವೃದ್ಧಿ ಕಾಮಗಾರಿಗಳ ಬಾಕಿ ಬಿಲ್ ಪಾವತಿಗಾಗಿ ರಾಮನಗರ ಜಿಲ್ಲಾ ಪಂಚಾಯತಿಗೆ ರೂ.3.50 ಲಕ್ಷಗಳನ್ನು (ರೂಪಾಯಿಗಳು ಮೂರು ಲಕ್ಷದ ಐವತ್ತು ಸಾವಿರಗಳು ಮಾತ್ರ) ಪ್ರಸ್ತುತ 2016-17ನೇ ಸಾಲಿನ ಲೆಕ್ಕ ಶೀರ್ಷಿಕೆ: 4702-00-101-1-14 (ಹೊಸ ಕೆರೆಗಳ ನಿರ್ಮಾಣ ಬಂಡವಾಳ ವೆಚ್ಚಗಳು) ರಡಿ ಕೆಳಕಂಡ ಷರತ್ತುಗಳಿಗೊಳಪಟ್ಟು ಕೆಳಕಂಡ Objective Code ವಾರು ಅನುದಾನ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ.

ಷರತ್ತುಗಳು:

1. ಜಿಲ್ಲಾ ಪಂಚಾಯತಿಯು ಬಿಡುಗಡೆ ಮಾಡಿರುವ ಅನುದಾನವನ್ನು ಪಂ.ರಾಜ್ ಇಂಜಿನಿಯರಿಂಗ್ ವಿಭಾಗ, . . ರವರ ಕ್ರಿಯಾ ಯೋಜನೆಯಂತೆ ಅನುಷ್ಠಾನಗೊಳಿಸಿದ ರಾಮನಗರ ಜಿಲ್ಲೆ ಚನ್ನಪಟ್ಟಣ ತಾ: ಜೆ.ಬ್ಯಾಡರಹಳ್ಳಿ ಪಂಚಾಯತಿ ಕಲ್ಲಾಪುರ ಊರ ಮುಂದಿನ ಕೆರೆ ಮತ್ತು ಚನ್ನಪಟ್ಟಣ ತಾ: ಜೆ. ಬ್ಯಾಡರಹಳ್ಳಿ ಜಗದಾಪುರ-ಬೈಚಾಪುರ ಕೆರೆ ಮತ್ತು ಕನಕಪುರ ತಾ: ಮುಳ್ಳಳ್ಳಿ ಗ್ರಾ.ಪಂ. ನ ಮುಳ್ಳಳ್ಳಿ ಬಸವನ ಕೆರೆ ಕಾಮಗಾರಿಗಳ ಬಿಲ್ ಪಾವತಿಗೆ ಮಾತ್ರ ವಿನಿಯೋಗಿಸತಕ್ಕದ್ದು.
2. ಕೆರೆಗಳ ಪುನರುಜ್ಜೀವನ ಕಾರ್ಯಕ್ರಮದಡಿ ಈ ಆದೇಶದಲ್ಲಿ ಬಿಡುಗಡೆಯಾದ ಅನುದಾನವನ್ನು ಕಾಮಗಾರಿ ಅನುಸಾರ ಖಜಾನೆಯಿಂದ ಡಿ.ಸಿ. ಬಿಲ್ ಮುಖಾಂತರವೇ ಡ್ರಾ

ಮಾಡಿ ನೇರವಾಗಿ ಗುತ್ತಿಗೆದಾರರಿಗೆ ಪಾವತಿ ಮಾಡತಕ್ಕದ್ದು. ಕ್ರೆಡಿಲ್ ಮುಖಾಂತರ ಕಾಮಗಾರಿ ಅನುಷ್ಠಾನ ಮಾಡಿದಲ್ಲಿ ನಿಯಮಾನುಸಾರ ಬಿಲ್ ಪಾವತಿಸತಕ್ಕದ್ದು

3. ಈ ಕಾರ್ಯಕ್ರಮದಲ್ಲಿ ಬಿಡುಗಡೆಯಾದ ಅನುದಾನಕ್ಕೆ ವೆಚ್ಚದ ಮಾಹಿತಿ worksoft website ನಲ್ಲಿ up load ಮಾಡುವುದರೊಂದಿಗೆ ಹಣ ಬಳಕೆ ಪ್ರಮಾಣ ಪತ್ರವನ್ನು ಸಲ್ಲಿಸತಕ್ಕದ್ದು.
4. ಬಿಡುಗಡೆಯಾದ ಅನುದಾನಕ್ಕೆ ವೆಚ್ಚದ ಮಾಹಿತಿಯನ್ನು ಹಾಗೂ ಕಾಮಗಾರಿಗಳ ಪ್ರಗತಿ ವಿವರವನ್ನು worksoft website ನಲ್ಲಿ ದಾಖಲಿಸತಕ್ಕದ್ದು.
5. ಈ ಕಾರ್ಯಕ್ರಮದಡಿ ಜಿಲ್ಲಾ ಪಂಚಾಯತಿಯ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜಿಲ್ಲಾಧಿಕಾರಿಗಳಿಗೆ ಅಗತ್ಯ ಸಹಕಾರ ನೀಡುವುದರೊಂದಿಗೆ ಸಮನ್ವಯದ ಅಧಿಕಾರಿಗಳಾಗಿರುವುದರಿಂದ ಈ ಅನುದಾನ ಸಂಬಂಧ ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು ಜವಾಬ್ದಾರರಾಗಿರುತ್ತಾರೆ.
6. ಜಿಲ್ಲಾ ಪಂಚಾಯತಿಗೆ ಬಿಡುಗಡೆ ಮಾಡಿದ ಅನುದಾನವನ್ನು ಯಾವುದೇ ಕಾರಣಕ್ಕೂ ವ್ಯಪಗತವಾಗದಂತೆ ಹಾಗೂ ಜಿಲ್ಲಾ ಖಜಾನೆಯು ಪ್ರಸ್ತುತ ವರ್ಷಕ್ಕೆ ನಿಗದಿಗೊಳಿಸುವ ದಿನಾಂಕದೊಳಗೆ ಡ್ರಾ ಮಾಡಿ ವಿನಿಯೋಗಿಸತಕ್ಕದ್ದು.
7. ಆದೇಶದಂತೆ ಜಿ.ಪಂ.ಗಳು ಅನುಷ್ಠಾನಗೊಳಿಸಿದ ಕಾಮಗಾರಿಗಳ ತಾಲ್ಲೂಕುವಾರು ಭೌತಿಕ/ಆರ್ಥಿಕ ಪ್ರಗತಿ ವರದಿಯನ್ನು ಮುಖ್ಯ ಇಂಜಿನಿಯರ್, ಪಂರಾಇಂ ಇಲಾಖೆ ರವರ ಮುಖಾಂತರ ಸರ್ಕಾರಕ್ಕೆ ಸಲ್ಲಿಸತಕ್ಕದ್ದು.
8. 2014-15ನೇ ಸಾಲಿನಿಂದ ಇಲಾಖೆಯಲ್ಲಿ ಅನುಷ್ಠಾನಗೊಳಿಸುತ್ತಿರುವ ಅನುಮೋದನೆಗೊಂಡ ಕ್ರಿಯಾ ಯೋಜನೆಯಲ್ಲಿರುವ ಎಲ್ಲಾ ಯೋಜನೆಗಳ ಎಲ್ಲಾ ಕಾಮಗಾರಿಗಳ ವಿವರಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿ, ಹಣ ಪಾವತಿಸಲು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಿಂದ ಪಡೆಯಲಾದ ಪಾವತಿ ಆದೇಶವಿದ್ದಲ್ಲಿ ಮಾತ್ರ ಕಾಮಗಾರಿಗಳ ಬಿಲ್ಲುಗಳ ಪಾವತಿಯನ್ನು ಕಡ್ಡಾಯವಾಗಿ ಮಾಡುವಂತೆ ಹಾಗೂ ಸರ್ಕಾರದ ಸೂಚನೆಗಳನ್ನು ಕಟ್ಟುನಿಟ್ಟಾಗಿ ಪಾಲಿಸುವಂತೆ ಈಗಾಗಲೇ ಸೂಚಿಸಲಾಗಿದೆ. ಅದರಂತೆ, ಪ್ರಸ್ತುತ ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನಕ್ಕೆ ಸಂಬಂಧಿಸಿದಂತೆ ಕೈಗೊಂಡು ಪೂರ್ಣಗೊಳಿಸಿರುವ ಕಾಮಗಾರಿಗಳನ್ನು ಗಾಂಧಿ ಸಾಕ್ಷಿ ಕಾಯಕ ತಂತ್ರಾಂಶದಲ್ಲಿ ಅಳವಡಿಸಿರುವ ನಿಬಂಧನೆಗೊಳಪಡಿಸಿದೆ.

ಈ ಆದೇಶವನ್ನು ಆರ್ಥಿಕ ಇಲಾಖೆಯ ಟಿಪ್ಪಣಿ ಸಂ:ಆಇ/331/ವೆಚ್ಚ-6/2016 ದಿನಾಂಕ: 24-9-2016 ಹಾಗೂ ಆದೇಶ ಸಂಖ್ಯೆ:ಆಇ/53/ಬಿಆರ್‌ಎಸ್/16 ದಿ:24-9-2016ರನ್ವಯ ಹೊರಡಿಸಲಾಗಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

(ಬೂವನಹಳ್ಳಿ ನಾಗರಾಜ್)
ನಿರ್ದೇಶಕರು
ಸುವರ್ಣ ಗ್ರಾಮೋದಯ ಯೋಜನೆ ಹಾಗೂ
ಪದನಿಮಿತ್ತ ಸರ್ಕಾರದ ಉಪ ಕಾರ್ಯ
ಗ್ರಾಮೀಣಾಭಿವೃದ್ಧಿ ಮತ್ತು ಪಂ. ರಾಜ್ ಇಲಾಖೆ.

**ಪ್ರತಿಯನ್ನು:**

1. ಮಹಾಲೇಖಪಾಲರು (ಲೆಕ್ಕಪತ್ರ) ಕರ್ನಾಟಕ, ಬೆಂಗಳೂರು
2. ಮಹಾಲೇಖಪಾಲರು (ಆಡಿಟ್-1) ಕರ್ನಾಟಕ, ಬೆಂಗಳೂರು
3. ಮಹಾಲೇಖಪಾಲರು (ಆಡಿಟ್-2) ಕರ್ನಾಟಕ, ಬೆಂಗಳೂರು
4. ಸರ್ಕಾರದ ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಸಚಿವರ ಆಪ್ತ ಕಾರ್ಯದರ್ಶಿಗಳು, ವಿಧಾನ ಸೌಧ, ಬೆಂಗಳೂರು.
5. ಅಪರ ಮುಖ್ಯ ಕಾರ್ಯದರ್ಶಿಗಳು ಹಾಗೂ ಅಭಿವೃದ್ಧಿ ಆಯುಕ್ತರು, ವಿಧಾನ ಸೌಧ, ಬೆಂಗಳೂರು.
6. ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ಆಪ್ತ ಕಾರ್ಯದರ್ಶಿಗಳು, ವಿಧಾನ

ಸೌಧ, ಬೆಂಗಳೂರು.

7.ಸರ್ಕಾರದ ಪ್ರಧಾನ ಕಾರ್ಯದರ್ಶಿಗಳು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

8.ಸರ್ಕಾರದ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, (ಪಿಎಂಯು) (ಐಎಫ್) 5ನೇ ಹಂತ, ಬಹುಮಹಡಿ ಕಟ್ಟಡ, ಬೆಂಗಳೂರು.

9.ವಿಶೇಷಾಧಿಕಾರಿಗಳು, (ಜಿ.ಪಂ) ಮತ್ತು ಪದನಿಮಿತ್ತ ಸರ್ಕಾರದ ಉಪ ಕಾರ್ಯದರ್ಶಿಗಳು, ಆರ್ಥಿಕ ಇಲಾಖೆ, ವಿಧಾನ ಸೌಧ, ಬೆಂಗಳೂರು.

10.ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.

11.ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.

12. ಜಿಲ್ಲಾ ಖಜಾನಾಧಿಕಾರಿಗಳು, ರಾಮನಗರ

13.ಉಪ ನಿರ್ದೇಶಕರು, ನೆಟ್ ವರ್ಕ್ ಮ್ಯಾನೇಜ್‌ಮೆಂಟ್ ಸೆಂಟರ್, ಖಜಾನಾ ಇಲಾಖೆ, ಖನಿಜ ಭವನ, ರೇಸ್‌ಕೋರ್ಸ್ ರಸ್ತೆ, ಬೆಂಗಳೂರು.

14.ಅಧೀನ ಕಾರ್ಯದರ್ಶಿ, ವೆಚ್ಚ-6, ಜಿ.ಪಂ, ಆರ್ಥಿಕ ಇಲಾಖೆ, ಬೆಂಗಳೂರು.

15. ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು, ಜಿಲ್ಲಾ ಪಂಚಾಯತ್, ರಾಮನಗರ

16.ಮುಖ್ಯ ಇಂಜಿನಿಯರ್, ಪಂಚಾಯತ್‌ರಾಜ್ ಇಂಜಿನಿಯರಿಂಗ್ ಇಲಾಖೆ, ಗ್ರಾಮೀಣಾಭಿವೃದ್ಧಿ ಭವನ, 2ನೇ ಮಹಡಿ, ಆನಂದರಾವ್ ವೃತ್ತ, ಬೆಂಗಳೂರು.-9.

17. ಅಧೀಕ್ಷಕ ಅಭಿಯಂತರರು, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ, ಬೆಂಗಳೂರು

18. ಕಾರ್ಯಪಾಲಕ ಅಭಿಯಂತರರು.ಪಂಚಾಯತ್ ರಾಜ್ ಇಂಜಿನಿಯರಿಂಗ್ ವಿಭಾಗ, ರಾಮನಗರ

19.ರಕ್ಷಾ ಕಡತ/ಹೆಚ್ಚುವರಿ ಪ್ರತಿಗಳು.